# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ:– 18–12–2021 ರಂದು ಬೆಳಗ್ಗೆ:– 11.30 ಗಂಟೆಗೆ ಶ್ರೀ. ಶ್ರೀ ಶಿವಕುಮಾರ ಸ್ವಾಮೀಜಿ ಸಾರ್ವಜನಿಕ ಸೇವಾ ಸಂಕೀರ್ಣ ವಾರ್ಡ್ ಸಂಖ್ಯೆ 126 ಮಾರುತಿಮಂದಿರದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.**

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ:ಬಿ12(5)/ಪಿ.ಆರ್/35/2020–21/21–09–2020ರ ಆದೇಶದಂತೆ ನೋಡೆಲ್ ಅಧಿಕಾರಿಯನ್ನಾಗಿ ಶ್ರೀ. ಜಯಶಂಕರ್ ರೆಡ್ಡಿ, ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಸೌಕರ್ಯ, ಮಹದೇವಪುರ ವಿಭಾಗ, ಬಿ.ಬಿ.ಎಂ.ಪಿ ರವರನ್ನು ನೇಮಿಸಲಾಗಿದ್ದು, ಸದರಿ ಆದೇಶದಂತೆ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾದಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿಗಳು ಮತ್ತು ಸದಸ್ಯರು:–**

| ಕ್ರ. ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ನೋಡೆಲ್ ಅಧಿಕಾರಿ: ಶ್ರೀ. ಜಯಶಂಕರ್ ರೆಡ್ಡಿ, ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಸೌಕರ್ಯ, ಮಹದೇವಪುರ ವಿಭಾಗ, ಬಿ.ಬಿ.ಎಂ.ಪಿ. | 9741697632 |
| 2 | ಕಾರ್ಯದರ್ಶಿ ಮತ್ತು ಸಂಚಾಲಕರು<br>ಶ್ರೀ. ರವಿರಾಜ್ ಎಸ್. ಪಿ, ಸಹಾಯಕ ಅಭಿಯಂತರರು, ವಾರ್ಡ್ ನಂ.126 | 9980764000 |
| 3 | ಶ್ರೀ. ತಿಮ್ಮಪ್ಪ, RI- Ward no.126, Maruthimandira. | 9480685657 |
| 4 | ಶ್ರೀ. ಲಕ್ಷ್ಮಿ ನರಸಿಂಹಯ್ಯ, ತೋಟಗಾರಿಕೆ ಅಧಿಕಾರಿ, ಚಂದ್ರಾಬಡಾವಣೆ. | 9845257299 |
| 5 | ಶ್ರೀ. ರಂಗದಾಮಯ್ಯ, ಕಾರ್ಯ ನಿರ್ವಾಹಕರು, ಮಾರುತಿಮಂದಿರ. | 9880376090 |
| 6 | ಶ್ರೀ. ರಾಹುಲ್, AE- BWSSB, ChandraLayout. | 7026266677 |
| 7 | ಶ್ರೀಮತಿ. ಮಾಲತಿ, ಆರೋಗ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಮೂಡಲಪಾಳ್ಯ | 9632112539 |
| 8 | ಶ್ರೀಮತಿ. ಮಮತ, ಕಿರಿಯ ಅಭಿಯಂತರರು, ಬೆಸ್ಕಾಂ. | 9449869245 |
| 9 | ಶ್ರೀ. ರಾಮಮೂರ್ತಿ, (RWA – GKW Layout)- ಸದಸ್ಯರು | 9900709101 |
| 10 | ಶ್ರೀಮತಿ. ರೇವತಿ. ಎಮ್– ಸಾರ್ವಜನಿಕರು | 9632112539 |
| 11 | ಶ್ರೀ. ಎಸ್. ಕೃಷ್ಣಮೂರ್ತಿ ರಾವ್. (RWA – Canarabank Colony)- ಸದಸ್ಯರು | 9448055204 |
| 12 | ಶ್ರೀ. ಕೆ.ಸಿ. ಮೋಹನ್ ರಾಜ್ (RWA – Canarabank Colony)- ಸದಸ್ಯರು | 9341212197 |

*****

ದಿನಾಂಕ: 18-12-2021 ರಂದು ಬೆಳಿಗ್ಗೆ 11.30 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

**ಚರ್ಚಿಸಲಾದ ವಿಷಯಗಳ ವಿವರಗಳು:-**

1. ಶ್ರೀ. ಎಸ್. ಕೃಷ್ಣಮೂರ್ತಿ ರಾವ್. (RWA – Canarabank Colony)- ಸದಸ್ಯರು ರವರು ಮಾತನಾಡುತ್ತಾ,
   - ಕೆನರಾಬ್ಯಾಂಕ್ ಕಾಲೋನಿ 1ನೇ ಅಡ್ಡರಸ್ತೆ, 4ನೇ ಮುಖ್ಯರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ರಸ್ತೆ ಅಗೆದಿರುವುದನ್ನು ದುರಸ್ತಿ ಪಡಿಸಲು ಸಭೆಯಲ್ಲಿ ತಿಳಿಸಿದರು..

     **ಕ್ರಮ:** ಸಹಾಯಕ ಕಾರ್ಯಪಾಲಕ ಅಭಿಯಂತರರು, ಚಂದ್ರಬಡಾವಣೆ, (Ph.No: 7026266677)
   - ವಾರ್ಡ್ ವ್ಯಾಪ್ತಿಯಲ್ಲಿರುವ ಕೆನರಾಬ್ಯಾಂಕ್ ಕಾಲೋನಿಯ ಸುತ್ತಮುತ್ತಲಿನ ರಸ್ತೆಗಳನ್ನು ಡಾಂಬರೀಕರಣ ಮತ್ತು ಮೋರಿಗಳನ್ನು ದುರಸ್ತಿಪಡಿಸುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

     **ಕ್ರಮ:** ಸಹಾಯಕ ಕಾರ್ಯಪಾಲಕ ಅಭಿಯಂತರರು, ಚಂದ್ರಬಡಾವಣೆ ಉಪವಿಭಾಗ, ಬಿ.ಬಿ.ಎಂ.ಪಿ. (Ph.No: 9632244060)
   - ಕೆನರಾಬ್ಯಾಂಕ್ ಕಾಲೋನಿ 3ನೇ ಅಡ್ಡರಸ್ತೆಯಲ್ಲಿರುವ ಸಿ.ಎ ನಿವೇಶನವನ್ನು ಸ್ವಚ್ಛಗೊಳಿಸಲು ಸಭೆಯಲ್ಲಿ ತಿಳಿಸಿದರು.

     **ಕ್ರಮ:** ಸಹಾಯಕ ಕಾರ್ಯಪಾಲಕ ಅಭಿಯಂತರರು, SWM, BBMP. (Ph.No: 9480484746)
   - ಕೆನರಾಬ್ಯಾಂಕ್ ಕಾಲೋನಿ 3ನೇ ಅಡ್ಡರಸ್ತೆಯಲ್ಲಿರುವ ಬೀದಿ ದೀಪದ ಕಂಬವನ್ನು ಸ್ಥಳಾಂತರಿಸುವ ಬಗ್ಗೆ ತಿಳಿಸಿದರು.

     **ಕ್ರಮ:** ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, (Ph.NO: 9449869245).

2. ಶ್ರೀ. ರಾಮಮೂರ್ತಿ (RWA- GKW Layout) ರವರು ಮಾತನಾಡುತ್ತಾ,
   - ಬೀದಿ ನಾಯಿಗಳ ಹಾವಳಿ ಜಿ.ಕೆ.ಡಬ್ಲ್ಯೂ ಬಡಾವಣೆಯಲ್ಲಿ ಜಾಸ್ತಿಯಾಗಿದ್ದು ಸಾರ್ವಜನಿಕರಿಗೆ ಮತ್ತು ಮಕ್ಕಳಿಗೆ ತೊಂದರೆಯಾಗುತ್ತಿರುವ ಬಗ್ಗೆ ತಿಳಿಸಿ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದರು..

     **ಕ್ರಮ:** ಪಶು ವೈದ್ಯಾಧಿಕಾರಿಗಳು, ಗೋವಿಂದರಾಜನಗರ. (Ph.No: 9480683055)

3. ಶ್ರೀ. ವಿವೇಕ ಶಣೈ – ಅನುಭವನಗರ 1ನೇ ಅಡ್ಡರಸ್ತೆ– ಸಾರ್ವಜನಿಕರು.
   - ರಸ್ತೆ ಮೇಲಿನ ನೀರು ಮೋರಿಗೆ ಸೇರುವಂತೆ ಶೋಲ್ಡರ್ ಡ್ರೈನ್ ವ್ಯವಸ್ಥೆ ಮಾಡಿ ಕೊಡುವ ಬಗ್ಗೆ ತಿಳಿಸಿದರು.

     **ಕ್ರಮ:** ಸಹಾಯಕ ಅಭಿಯಂತರರು, ಮಾರುತಿಮಂದಿರ ವಾರ್ಡ್, ಬಿ.ಬಿ.ಎಂ.ಪಿ. (Ph.NO: 9980764000)
   - ರಸ್ತೆಯ ಎರಡೂ ಬದಿಗಳಲ್ಲಿ ವಾಹನ ನಿಲುಗಡೆ ಮಾಡುತ್ತಿರುವುದರಿಂದ ವಾಹನ ಸಂಚಾರಕ್ಕೆ ಮತ್ತು ಸಾರ್ವಜನಿಕರು ಪಾದಚಾರಿ ಮಾರ್ಗವಾಗಿ ಸಂಚಾರ ಮಾಡುವುದಕ್ಕೆ ತುಂಬ ತೊಂದರೆಯಾಗುತ್ತಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು, ಹಾಗೂ ವಾಹನ ಪಾರ್ಕಿಂಗ್ ಸ್ಥಳ ನಿಗದಿ ಪಡಿಸುವ ಬಗ್ಗೆ ತಿಳಿಸಿದರು.

     **ಕ್ರಮ:** ಟ್ರಾಫಿಕ್ ಇನ್ಸ್‌ಪೆಕ್ಟರ್ –ಚಂದ್ರಾಬಡಾವಣೆ. (Ph.No: 9844185282)

ಈ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧ ಪಟ್ಟ ಇಲಾಖೆಗೆ ತಿಳಿಸಲು ನೋಡೆಲ್ ಅಧಿಕಾರಿಗಳು ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ನಂ.126 ರವರಿಗೆ ಸೂಚಿಸಲಾಯಿತು.

ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂದಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ಸಂಖ್ಯೆ.126

ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ.126

ಪ್ರತಿಯನ್ನು:

1) ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
5) ಮುಖ್ಯಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.